ಆ) ಖಾಸಗಿ ಕಾಲೇಜುಗಳಿಂದ ಬಡ ವಿದ್ಯಾರ್ಥಿಗಳಿಗೆ ಆಗುತ್ತಿರುವ ಅನ್ಯಾಯ, ವಂತಿಗೆ ಹಾಗೂ ಹೆಚ್ಚು ಶುಲ್ಕ ವಿಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಇ) ಮುಂದಿನ ವರ್ಷದಲ್ಲಿ ಭಟ್ಕಳ ತಾಲ್ಲೂಕಿಗೆ ಪದವಿ ಪೂರ್ವ ಕಾಲೇಜು ಮಂಜೂರು ಮಾಡಲಾಗುವುದೇ

ಶ್ರೀ ಬಿ ಕೆ ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಹೌದು

ಆ) ಇಲ್ಲ

ಇ) ಪ್ರಸ್ತಾವನೆಯಿರುವುದಿಲ್ಲ

ದಿನಾಂಕ 7 1 2004 ರ ಚುಕ್ಕೆ ಗುರುತಿಲ್ಲದ ಪ್ರಶ್ನೋತ್ತರಗಳು

ಮಹಿಳೆಯರಿಗೆ ಪದವಿವರೆಗೂ ಉಚಿತ ಶಿಕ್ಷಣ ಯೋಜನೆ

97 (551) ಶ್ರೀ ಅಂಗಾರ ಎಸ್ (ಸೂಳ್ಯ) ಮಾನ್ಯ ಉನ್ನತ ಶಿಕ್ಷಣ ಮತ್ತು ವಾರ್ತಾ ಸಚಿವರು ಈ ಕಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೇಂದ್ರ ಸರ್ಕಾರದ ಮಹಿಳೆಯರಿಗೆ ಉಚಿತ ಪದವಿ ಶಿಕ್ಷಣ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಕ್ಕೆ ತರಲಾಗಿದೆಯೇ

ಆ) ಅನುಷ್ಠಾನಕ್ಕೆ ತಂದಿದ್ದರೆ, ಈವರೆಗೂ ಸದರಿ ಯೋಜನೆಯಡಿ ಎಷ್ಟು ಜನರು ಆಯ್ಕೆಯಾಗಿದ್ದಾರ?

ಡಾ॥ ಜಿ ಪರಮೇಶ್ವರ್ (ಉನ್ನತ ಶಿಕ್ಷಣ ಮತ್ತು ವಾರ್ತಾ ಸಚಿವರು)

ಅ) ಆದರೆ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರಿಗೆ ಉಚಿತ ಶಿಕ್ಷಣ ನೀಡುವ ಬಗ್ಗೆ ಸರ್ಕಾರದ ಹಂತದಲ್ಲಿ ಪರಿಶೀಲಿಸಲಾಗುತ್ತಿದೆ

ಆ) ಉದ್ಭವಿಸುವುದಿಲ್ಲ

ಸೂಳ್ಯ ತಾಲ್ಲೂಕಿನಲ್ಲಿ ಡಾ॥ ಶಿವರಾಮ ಕಾರಂತ ಪ್ರಥಮ ದರ್ಜೆ ಕಾಲೇಜಿನಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ

99 (556) ಶ್ರೀ ಅಂಗಾರ ಎಸ್ (ಸೂಳ್ಯ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸುಳ್ಯ ತಾಲ್ಲೂಕಿನ ಬೆಳ್ಳಾರೆಯ ಡಾ॥ ಶಿವರಾಮ ಕಾರಂತ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಸರಿಯಾದ ಕಟ್ಟಡ ಹಾಗೂ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) ಬಂದಿದ್ದಲ್ಲಿ ಯಾವ ಕ್ರಮ ಕೈಗೊಳ್ಳಲಾಗಿದೆ?

ಡಾ॥ ಜಿ ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು)

ಅ) ಬಂದಿದೆ

ಆ) ಸುಳ್ಯ ತಾಲ್ಲೂಂನ ಬೆಳ್ಳಾರೆಯ ಡಾ॥ ಶಿವರಾಮ ಕಾರಂತ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕಟ್ಟಡ ಸಮಸ್ಯೆಯನ್ನು ಮನಗಂಡು ಸದರಿ ಕಾಲೇಜಿನ ವಿಸ್ತರಣೆಗಾಗಿ ಹುಡ್ಕೋ